ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (395)264
ಸದಸ್ಯರ ಹೆಸರು : ಶ್ರೀ.ವಿ.ಸೋಮಣ್ಣ
ಉತ್ತರಿಸುವ ಸಚಿವರು : (ಶ್ರೀ.ಆರ್.ಅಶೋಕ್)
: ಮಾನ್ಯ ಸಾರಿಗೆ ಸಚಿವರು

ಅ) ಬೆಂಗಳೂರು ನಗರದಲ್ಲಿ ಪ್ರತಿ ದಿನ ಸಂಚರಿಸುವ ಸರಾಸರಿ ದ್ವಿಚಕ್ರ ವಾಹನಗಳ ಸಂಖ್ಯೆ ಎಷ್ಟು?

ದಿನಾಂಕ: **30-04-2008** ಅಂತ್ಯಕ್ಕೆ ಇರುವಂತೆ ಬೆಂಗಳೂರು ನಗರದಲ್ಲಿ ನೋಂದಾಯಿತವಾಗಿ ಸಂಚರಿಸುತ್ತಿರುವ ಒಟ್ಟು ದ್ವಿಚಕ್ರ ವಾಹನಗಳ ಸಂಖ್ಯೆ: **22,18,040**

ಆ) ವಾಹನಗಳ ದಟ್ಟಣೆಯಿಂದ ದ್ವಿಚಕ್ರ ವಾಹನಗಳು ಕನಿಷ್ಠ ವೇಗದಲ್ಲಿ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಹೌದು.

ಇ) ಬೆಂಗಳೂರು ನಗರದಲ್ಲಿ ದ್ವಿಚಕ್ರ ವಾಹನ ಚಾಲಕರು ಹೆಲ್ಮೆಟ್ ಧರಿಸುವುದನ್ನು ಯಾವಾಗ ಕಡ್ಡಾಯಗೊಳಿಸಲಾಯಿತು?

ಸರ್ಕಾರದ ಅಧಿಸೂಚನೆ

ಸಂ:ಹೆಚ್.ಡಿ/**278**/ಎಸ್.ಎಸ್.ಟಿ/**2004**, ದಿನಾಂಕ:**01-08-2006** ಪ್ರಕಾರ ಬೆಂಗಳೂರು ನಗರದಲ್ಲಿ ದ್ವಿಚಕ್ರ ವಾಹನ ಸವಾರರಿಗೆ **01-11-2006** ರಿಂದ ಹೆಲ್ಮೆಟ್ ಕಡ್ಡಾಯಗೊಳಿಸಲಾಯಿತು.

ಈ) ಬೆಂಗಳೂರು ನಗರದಲ್ಲಿ ದ್ವಿಚಕ್ರ ವಾಹನ ಚಾಲಕರು ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ದ್ವಿಚಕ್ರ ವಾಹನಗಳಿಗೆ ಹೆಲ್ಮೆಟ್ ಕಡ್ಡಾಯ ಗೊಳಿಸಿರುವುದನ್ನು ರದ್ದುಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇಲ್ಲ.

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (397)265
2) ಸದಸ್ಯರ ಹೆಸರು : ಶ್ರೀ ಸೋಮಣ್ಣ ವಿ.
3) ಉತ್ತರಿಸಬೇಕಾದ ಸಚಿವರು : (ಶ್ರೀ.ಬಿ.ಎಸ್.ಯಡಿಯೂರಪ್ಪ)
: ಮುಖ್ಯ ಮಂತ್ರಿಗಳು

ಅ) ಕಳೆದ **3** ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಎಷ್ಟು ಜನ ನಿವೇಶನರಹಿತ ಅರ್ಜಿದಾರರಿಗೆ ನಿವೇಶನಗಳನ್ನು ವಿವಿಧ ಬಡಾವಣೆಗಳಲ್ಲಿ ಹಂಚಿಕೆ ಮಾಡಿದೆ;

ಕಳೆದ ಮೂರು ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅರ್ಕಾವತಿ ಬಡಾವಣೆಯಲ್ಲಿ ಒಟ್ಟು ವಿವಿಧ ಅಳತೆಯ **8,813** ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ.